# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 608
2. ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಕೆ.ಗೋವಿಂದರಾಜ್ (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 24.09.2020
4. ಉತ್ತರಿಸುವ ಸಚಿವರು : ಮಾನ್ಯ ಗೃಹ ಸಚಿವರು

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಕಳೆದ 3 ವರ್ಷಗಳ ಅವಧಿಯಲ್ಲಿ ಬೆಂಗಳೂರು ನಗರ ಸೇರಿದಂತೆ ರಾಜ್ಯದ ಯಾವ ಯಾವ ಭಾಗಗಳಲ್ಲಿ ಮಾದಕ ವಸ್ತು ಮಾರಾಟಗಾರರ ಬಂಧನವಾಗಿದ್ದು, ಮತ್ತು ಯಾವ ಯಾವ ಮಾದಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ;</td><td>ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ನಗರ ಸೇರಿದಂತೆ ಮಾದಕ ವಸ್ತು ಮಾರಾಟಗಾರರ ಪ್ರಕರಣಗಳಲ್ಲಿ ಬಂಧಿಸಿರುವ ಆರೋಪಿಗಳ ಸಂಖ್ಯೆ ಮತ್ತು ವಶ ಪಡಿಸಿಕೊಂಡಿರುವ ಮಾದಕ ವಸ್ತುಗಳ ವಿವರಗಳು ಈ ಕೆಳಕಂಡಂತಿದೆ.<br>ರಾಜ್ಯದಲ್ಲಿ ಎನ್.ಡಿ.ಪಿ.ಎಸ್. ಕಾಯ್ದೆ ಅಡಿಯಲ್ಲಿ ಬಂಧಿಸಿರುವ ಆರೋಪಿಗಳ ಸಂಖ್ಯೆ.<br><table><tr><th>ವರ್ಷ</th><th>ದಾಖಲಿಸಿರುವ ಪ್ರಕರಣಗಳ ಸಂಖ್ಯೆ</th><th>ಬಂಧಿಸಿರುವ ಆರೋಪಿಗಳು ಸಂಖ್ಯೆ</th></tr><tr><td>2017</td><td>1126</td><td>1604</td></tr><tr><td>2018</td><td>1032</td><td>1470</td></tr><tr><td>2019</td><td>1661</td><td>2263</td></tr><tr><td>2020 (15 ಸೆಪ್ಟೆಂಬರ್ ವರೆಗೆ)</td><td>2589</td><td>2865</td></tr></table><br>ಎನ್.ಡಿ.ಪಿ.ಎಸ್. ಕಾಯ್ದೆ ಅಡಿಯಲ್ಲಿ ದಾಖಾಗಿರುವ ಪ್ರಕರಣಗಳ ಸಂಖ್ಯೆ ಮತ್ತು ಯಾವ ಯಾವ ಮಾದಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂಬ ವಿವರಗಳನ್ನು <u>ಅನುಬಂಧದಲ್ಲಿ</u> ಒದಗಿಸಲಾಗಿದೆ.</td></tr>
<tr><td>ಆ</td><td>ಈ ಮಾದಕ ವಸ್ತುಗಳ ಬಳಕೆ ಮತ್ತು ಪೂರೈಕೆದಾರರ ಜಾಲದಲ್ಲಿ ಭಾಗಿಗಳಾಗಿರುವವರ ಮಾಹಿತಿ ಗೃಹ ಇಲಾಖೆಯಲ್ಲಿ ಇದೆಯೇ: ಹಾಗಿದ್ದಲ್ಲಿ ಅಂತಹ ಸಂಕಷ್ಟ ವ್ಯಕ್ತಿಗಳ ಪ್ರತ್ಯೇಕ ಮಾಹಿತಿ ಮತ್ತು ಕೈಗೊಂಡಿರುವ ಕ್ರಮಗಳ ಸಂಪೂರ್ಣ ವಿವರ ಒದಗಿಸುವುದು ;</td><td>ಮೂರು ವರ್ಷಗಳಲ್ಲಿ ಮಾದಕ ವಸ್ತುಗಳ ಮಾರಾಟ, ಸಾಗಣೆ ಮತ್ತು ಸೇವನೆಯ ಪ್ರಕರಣಗಳಲ್ಲಿ <u>ಒಟ್ಟು 8202</u> ಆರೋಪಿಗಳನ್ನು ಬಂಧಿಸಲಾಗಿರುತ್ತದೆ. ಬಂಧಿತರಲ್ಲಿ 7977 ದೇಶಿಯ ಆರೋಪಿಗಳು ಮತ್ತು 225 ವಿದೇಶಿ ಆರೋಪಿಗಳಾಗಿರುತ್ತಾರೆ. ವಿವರಗಳು <u>ಅನುಬಂಧದಲ್ಲಿ</u> ಒದಗಿಸಿದೆ.</td></tr>
</table>

ಇ ಲಾಕ್‌ಡೌನ್ ಇಂತಹ ಸಂಕಷ್ಟ ಸಂದರ್ಭದಲ್ಲೂ ಸಹ ಬೆಂಗಳೂರು ನಗರದಲ್ಲಿ ಕೋಟ್ಯಾಂತರ ರೂಪಾಯಿಗಳ ಮಾದಕ ವಸ್ತು /ದ್ರವ್ಯ /ಡ್ರಗ್ಸ್ ಮಾರಾಟವಾಗಿರುವ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ:

ಲಾಕ್ ಡೌನ್ ಸಂದರ್ಭದಲ್ಲಿ ಮಾದಕ ವಸ್ತು ಕುರಿತಂತೆ ಎನ್.ಡಿ.ಪಿ.ಎಸ್. ಕಾಯ್ದೆ ಅಡಿಯಲ್ಲಿ ಪ್ರಕರಣಗಳು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಲಾಕ್ ಡೌನ್ ಅವಧಿಯಲ್ಲಿ, ಬೆಂಗಳೂರು ನಗರದಲ್ಲಿ ಎನ್.ಡಿ.ಪಿ.ಎಸ್. ಕಾಯ್ದೆ ಅಡಿಯಲ್ಲಿ ದಾಖಲಿಸಲಾದ ಪ್ರಕರಣಗಳ ಅಂಕಿಅಂಶಗಳ ವಿವರ ಈ ಕೆಳಕಂಡಂತೆ ಇರುತ್ತದೆ.

ದಿನಾಂಕ 23-03-2020 ರಿಂದ 31-05-2020 ರವರೆಗೆ

| No. of cases | Drugs seized | No. of person Arrested |
|---|---|---|
| 13 | Ganja-11.495kg. | 27 |
| 5 | MDMA-64gm | 11 |
| 2 | Cocaine-69gm | 2 |

ಈ ಅವಧಿಯಲ್ಲಿ ವಶ ಪಡಿಸಿಕೊಂಡಿರುವ ಮಾದಕ ವಸ್ತುಗಳ ಮೌಲ್ಯ ರೂ. **6,94,000/-**

ಈ ಡ್ರಗ್ಸ್ ಅಕ್ರಮ ಮಾರಾಟ ಮತ್ತು ಬಳಕೆದಾರರ ಮಾಹಿತಿ ಪಡೆದು ನಿಯಂತ್ರಿಸುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿರುವುದು ಹಾಗೂ ಮಾದಕ ವಸ್ತು ನಿಗ್ರಹ ದಳ (ಎನ್.ಸಿ.ಬಿ) ರವರು ತನಿಖೆ ಕೈಗೆತ್ತಿಕೊಂಡಿರುವುದು ನಿಜವೇ; ಹಾಗಿದ್ದಲ್ಲಿ ಸರ್ಕಾರ ಈ ನಿಟ್ಟಿನಲ್ಲಿ ಯಾವ ರೀತಿಯ ತನಿಖಾ ವ್ಯಾಪ್ತಿ ಮತ್ತು ನಿಯಂತ್ರಣದ ಬಗ್ಗೆ ಕ್ರಮ ಕೈಗೊಂಡಿದೆ: ಸಂಪೂರ್ಣ ಮಾಹಿತಿ ಒದಗಿಸುವುದು)

ಡ್ರಗ್ಸ್ ಅಕ್ರಮ ಮಾರಾಟ ಮತ್ತು ಸೇವನೆ ಕುರಿತಂತೆ ಎನ್.ಡಿ.ಪಿ.ಎಸ್. ಕಾಯ್ದೆ ಅಡಿಯಲ್ಲಿ ಈಗಾಗಲೇ ಹಿಂದಿನ ವರ್ಷಗಳಿಗಿಂತಲೂ ಹೆಚ್ಚಿನ ಪ್ರಮಾಣದಲ್ಲಿ ಪ್ರಕರಣಗಳನ್ನು ದಾಖಲಿಸಿ ಕಾನೂನು ರೀತ್ಯಾ ಅಗತ್ಯ ಕ್ರಮಕೈಗೊಳ್ಳಲಾಗಿರುತ್ತದೆ. ಈ ಪ್ರಕರಣಗಳನ್ನು ನಿಯಂತ್ರಿಸುವಲ್ಲಿ ಯಾವುದೇ ವಿಫಲತೆ ಕಂಡುಬಂದಿರುವುದಿಲ್ಲ.

ರಾಜ್ಯದಲ್ಲಿ ಮಾದಕ ದ್ರವ್ಯಗಳ, ಮಾರಾಟ, ಸಾಗಣೆ ಮತ್ತು ಸೇವನೆಯನ್ನು ಶಾಲಾ-ಕಾಲೇಜು-ಹಾಸ್ಟೆಲ್‌ಗಳ ಮತ್ತು ಇತರೆ ಕಡೆಗಳಲ್ಲಿ ಕಟ್ಟುನಿಟ್ಟಾಗಿ ನಿಯಂತ್ರಿಸಲು ಹಾಗೂ ಇಂತಹ ಪ್ರಕರಣಗಳನ್ನು ತಡೆಗಟ್ಟಲು ರಾಜ್ಯದ ಪ್ರತಿ ಜಿಲ್ಲೆ ಹಾಗೂ ನಗರಗಳಲ್ಲಿ ವಿಶೇಷ ಸೈಬರ್, ನಾರ್ಕೋಟಿಕ್ ಎಕ್‌ನಾಮಿಕ್ ಪೊಲೀಸ್ ಠಾಣೆಗಳನ್ನು ಸ್ಥಾಪಿಸಲಾಗಿದೆ.

ರಾಜ್ಯದಲ್ಲಿ ಒಟ್ಟು 46 ಸೆನ್ ಪೊಲೀಸ್ ಠಾಣೆಗಳು ಹಾಗೂ ಇವುಗಳ ಪೈಕಿ ಬೆಂಗಳೂರು ನಗರದಲ್ಲಿ ಮಾತ್ರ 8 ವಿಶೇಷ ಸೆನ್ ಪೊಲೀಸ್ ಠಾಣೆಗಳು ಪ್ರತಿ ವಿಭಾಗಕ್ಕೆ ಒಂದರಂತೆ ಕಾರ್ಯನಿರ್ವಹಿಸುತ್ತಿದೆ.

**ಡ್ರಗ್ಸ್ ಅಕ್ರಮ ಮಾರಾಟ ಮತ್ತು ಸೇವನೆಯನ್ನು ನಿಯಂತ್ರಿಸಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.**

- ಸರ್ಕಾರದ ಆದೇಶ ಸಂಖ್ಯೆ: ಒಇ 16 ಪಿಎನ್‌ಡಿ 2018, ದಿನಾಂಕ: 27.08.2018 ರನ್ವಯ ಶಾಲಾ ಕಾಲೇಜು ಮತ್ತು ವಿಶ್ವವಿದ್ಯಾಲಯಗಳ ಹಂತದಲ್ಲಿ ಮಾದಕ ವಸ್ತುಗಳ ಬಳಕೆ ಮತ್ತು ಸಾಗಣೆ ತಡೆಗಟ್ಟಲು ವಿವಿಧ ಇಲಾಖೆಗಳ ಅಧಿಕಾರಿಗಳನ್ನೊಳಗೊಂಡಂತೆ ಸಮಿತಿಯನ್ನು ರಚಿಸಿ ಕರ್ತವ್ಯ ನಿಗಧಿಪಡಿಸಲಾಗಿದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ: ಹೆಚ್.ಡಿ. 01 ಪಿಎನ್‌ಡಿ 2019,

PITNDPS ಕಾಯಿದೆಅಡಿಯಲ್ಲಿ ಬಂಧನ ಆಜ್ಞೆಯನ್ನು ಹೊರಡಿಸಲಾಗಿದ್ದು, ಇದು ಕರ್ನಾಟಕ ರಾಜ್ಯದಲ್ಲಿ PITNDPS-1988 ಕಾಯಿದೆ ಅಡಿಯಲ್ಲಿ ಬಂಧನ ಆದೇಶ ಜಾರಿಗೊಳಿಸಿದ ಪ್ರಥಮ ಪ್ರಕರಣವಾಗಿದ್ದು, ಕರ್ನಾಟಕ ಉಚ್ಚ ನ್ಯಾಯಾಲಯದ ಸಲಹಾ ಮಂಡಳಿಯು ವಿದೇಶಿ ವ್ಯಕ್ತಿಯ ಬಂಧನದ ಆದೇಶವನ್ನು ಪುರಸ್ಕರಿಸಿರುತ್ತದೆ.

8. ಡ್ರಗ್ಸ್ ನಿಯಂತ್ರಣಕ್ಕೆ ಸಾರ್ವಜನಿಕ ಸಹಭಾಗಿತ್ವ ಪಡೆಯಲು ಸಾರ್ವಜನಿಕರ ಡ್ರಗ್ಸ್ ಅಕ್ರಮಗಳ ಬಗ್ಗೆ ರಹಸ್ಯ ಮಾಹಿತಿಗಳನ್ನು ನೀಡಲು ಶುಲ್ಕ ರಹಿತ ದೂರವಾಣಿ **ಸಂಖ್ಯೆ 1908** ಅನ್ನು ಪ್ರಾರಂಭಿಸಲಾಗಿದೆ. ಇದರಿಂದ ಸಾರ್ವಜನಿಕರು ಮುಕ್ತವಾಗಿ ಡ್ರಗ್ಸ್ ಸರಬರಾಜು, ಮಾರಾಟ, ಬಳಕೆಗಳ ಕುರಿತು ಪೊಲೀಸರಿಗೆ ಹೆಚ್ಚು ಹೆಚ್ಚು ಮಾಹಿತಿಗಳನ್ನು ನೀಡುವುದಕ್ಕೆ ಅವಕಾಶವಾಗಿರುತ್ತದೆ.
9. ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳು, ಮತ್ತು ಕೊಳಚೆ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವುದರ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಲು ಹಾಗೂ ಸಾರ್ವಜನಿಕರಲ್ಲಿ ಮಾದಕ ವಸ್ತುಗಳ ಸೇವನೆ ವಿರುದ್ಧ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.
10. ಮಾದಕ ದ್ರವ್ಯದ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಶಾಲಾ-ಕಾಲೇಜುಗಳಲ್ಲಿ ಡ್ರಗ್ ಅವೇರ್‌ನೆಸ್ ಪ್ರೋಗ್ರಾಮ್ ಅನ್ನು ನಡೆಸಿ, ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.
11. ಠಾಣಾ ಸರಹದ್ದಿನ ಬೀಟ್ ಮತ್ತು ಸಬ್-ಬೀಟ್‌ಗಳಲ್ಲಿ ಆಗ್ಗಿಂದಾಗ್ಗೆ ಸಭೆಯನ್ನು ನಡೆಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ವಿದ್ಯಾರ್ಥಿಗಳಿಗೆ ಉಪನ್ಯಾಸದ ಮೂಲಕ ವಿವರವಾಗಿ ತಿಳುವಳಿಕೆ ನೀಡಲಾಗುತ್ತಿದೆ.
12. ವಿದ್ಯಾರ್ಥಿಗಳು ಮತ್ತು ಯುವ ಸಮೂಹವು ಮಾದಕ ವಸ್ತುಗಳ ದುಷ್ಚಟಕ್ಕೆ ಬಲಿಯಾಗದಂತೆ ಶಾಲಾ ಕಾಲೇಜುಗಳ ಬಳಿ ಗಸ್ತು ವಾಹನಗಳಿಂದ ವಿಶೇಷವಾಗಿ ಗಸ್ತು ನಡೆಸಿ ಸ್ಥಳೀಯ ಪೊಲೀಸ್ ಅಧಿಕಾರಿ/ಸಿಬ್ಬಂದಿಗಳು ಆಯಾ ಶಾಖೆಗಳಿಗೆ ಹೋಗಿ ಮಾದಕ ವಸ್ತುಗಳ ದುಷ್ಪರಿಣಾಮದ ಬಗ್ಗೆ ಅರಿವು ಮೂಡಿಸಲಾಗುತ್ತಿದೆ ಹಾಗೂ ಮಾದಕ ವಸ್ತು ಸಾಗಣೆ ಹಾಗೂ ಮಾರಾಟ ಮಾಡುವವರ ವಿರುದ್ಧ ನಿಗಾ ವಹಿಸಲಾಗುತ್ತಿದೆ.
13. ಜನ ಸಾಮಾನ್ಯರಲ್ಲಿ ಮಾದಕ ವಸ್ತುಗಳ ವಿರುದ್ಧ ಅರಿವು ಮೂಡಿಸುವ ಸಲುವಾಗಿ ಬಿತ್ತಿ ಪತ್ರಗಳನ್ನು, ಸಿನಿಮಾ ಮಂದಿರಗಳಲ್ಲಿ ಸ್ಲೈಡ್ ಶೋ, ಸುದ್ದಿ ಮಾಧ್ಯಮಗಳಲ್ಲಿ ಮಾದಕ ವಸ್ತುಗಳ ಬಳಕೆ ವಿರುದ್ಧ ಸಂದೇಶಗಳನ್ನು ಪ್ರಕಟಿಸುವುದು, ಹೀಗೆ ಜನಸಾಮಾನ್ಯರಲ್ಲಿ ಅರಿವು ಮೂಡಿಸಲಾಗುತ್ತಿದೆ.

| | | |
|---|---|---|
| | | ದಿನಾಂಕ: 30/01/2020 ರಲ್ಲಿ ಪೊಲೀಸ್ ಆಯುಕ್ತರು, ಬೆಂಗಳೂ ನಗರ ಮತ್ತು ವಲಯ ಪೊಲೀಸ್ ಮಹಾ ನಿರೀಕ್ಷಕರುಗಳಿಗೆ ಪಿ.ಐ ಎನ್.ಡಿ.ಪಿ.ಎಸ್. ಕಾಯ್ದೆ, 1988ರ ಕಲಂ 3(1)ರಡಿಯಲ್ಲಿ ಮುಂಜಾ ಕ್ರಮವಾಗಿ ರೂಢಿಗತ ಅಪರಾಧಿಗಳನ್ನು **ಬಂಧಿಸಲು ಅಧಿ** ನೀಡಲಾಗಿದೆ. |
| ಉ | ವಿದ್ಯಾರ್ಥಿಗಳು ಮತ್ತು ಯುವ ಜನತೆಯನ್ನು ದಾರಿ ತಪ್ಪಿಸುವ, ಸಮಾಜದ ಶಾಂತಿ ಭಂಗಕ್ಕೆ ಸಮಾಜದ ಸ್ವಾಸ್ಥ್ಯಕ್ಕೆ ಮಾರಕವಾಗಿರುವ ಈ ಪಿಡುಗು ನಿವಾರಿಸುವ ನಿಟ್ಟಿನಲ್ಲಿ ಸರ್ಕಾರದ ಕಾನೂನು ಕ್ರಮಗಳು ಮತ್ತು ಇದುವರೆಗಿನ ಫಲಶೃತಿ ಕುರಿತಾಗಿ ಸಂಪೂರ್ಣ ಮಾಹಿತಿ ಒದಗಿಸುವುದು? | **ವಿದ್ಯಾರ್ಥಿಗಳು ಮತ್ತು ಯುವ ಜನತೆಯನ್ನು ದಾರಿ ತಪ್ಪಿಸುವ ಈ ಪಿಡಗ ನಿವಾರಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.**<br>1. ಮಾದಕ ದ್ರವ್ಯದ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಕಾಲೇಜುಗಳಲ್ಲಿ ಜಾ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.<br>2. ಮಾದಕ ದ್ರವ್ಯಗಳ ಮಾರಾಟ ತಡೆಗಟ್ಟುವ ಬಗ್ಗೆ ಠಾ ಮಟ್ಟದಲ್ಲಿ ಗೌಪ್ಯ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ. ಶಾ ಕಾಲೇಜುಗಳಿಗೆ ಭೇಟಿ ನೀಡಿ ಅಕ್ಕ ಪಕ್ಕವಿರುವ ಅಂ ಮುಂಗಟ್ಟುಗಳಲ್ಲಿ ಮಾದಕ ದ್ರವ್ಯ ಮಾರಾಟವಾಗುತ್ತಿರುವ ಬ ಗುಪ್ತವಾಗಿ ಮಾಹಿತಿಯನ್ನು ಕಲೆಹಾಕಿ ಕ್ರಮ ಕೈಗೊಳ್ಳಲಾಗುತ್ತಿದೆ.<br>3. ಮಾದಕ ದ್ರವ್ಯ (ಡ್ರಗ್ಸ್) ಹಾವಳಿಯನ್ನು ತಡೆಗಟ್ಟಲು ಸ ನಿಗಾವಹಿಸಿ ಮಾದಕ ದ್ರವ್ಯಗಳ ಮಾರಾಟ ಮತ್ತು ಸೇವಿಸುವ ಬಗ್ಗೆ ಮಾಹಿತಿ ಸಂಗ್ರಹಿಸಲಾಗುತ್ತಿದೆ ಹಾಗು ಇಂತಹ ಕಾನೂ ಬಾಹಿರ ಚಟವಟಿಕೆಗಳು ಕಂಡು ಬಂದಲ್ಲಿ ಸಾರ್ವಜನಿಕ ಟೋ ಫ್ರೀ ದೂರವಾಣಿ. ಸಂ.1908 ಕ್ಕೆ ಸಂಪರ್ಕಿಸುವ ಕೋರಲಾಗಿದೆ.<br>4. ಸಾಮಾಜಿಕ ಜಾಲತಾಣಗಳಲ್ಲಿ ಚುಟುಕ ವಿಡಿಯೋಗಳ ಮೂ ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಅರಿ ಮೂಡಿಸಲಾಗುತ್ತಿದೆ.<br>5. ಈ ಹಿಂದೆ ಡ್ರಗ್ಸ್ ಅಪರಾಧಗಳಲ್ಲಿ ಭಾಗಿಯಾಗಿರುವ ರೂಢೀಕ್ತ ಆಸಾಮಿಗಳ ಚಟುವಟಿಕೆಗಳ ಮೇಲೆ ತೀ ನಿಗಾವಣೆಯಲ್ಲಿಡಲಾಗಿದೆ. ಜೊತೆಗೆ ಅಂತರಾಜ್ಯ ಡ್ರ ಆರೋಪಿಗಳ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಅವರ ಮೇ ನಿಗಾಹಿಡಲಾಗಿದೆ.<br>6. ಬೆಂಗಳೂರು ನಗರ ಪೊಲೀಸರು ಪ್ರಥಮ ಬಾರಿಗೆ ಅಂತರ್ಜಾ (Dark Web) ಮುಖಾಂತರ ನೆದರ್‌ಲೆಂಡ್, ಕೆನಡ ಮುಂತಾದ ವಿದೇಶಗಳಿಂದ ಹಲವು ಮಾದರಿಯ ಡ್ರಗ್ಸ್‌ಗಳನ್ ಕೊರಿಯರ್ / ರಿಜಿಸ್ಟರ್ ಅಂಚೆ ಮುಖಾಂತರ ನಗರ ತರಿಸುತ್ತಿದ್ದ ಡ್ರಗ್ಸ್‌ಜಾಲವನ್ನು ಪತ್ತೆ ಮಾಡಿ, ಅಪಾರ ಪ್ರಮಾಣ ವಿವಿಧ ಡ್ರಗ್ಸ್‌ಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ.<br>7. ಈ ಜಾಲದಲ್ಲಿ ಭಾಗಿಯಾಗಿದ್ದ ಅಂಚೆ ಇಲಾಖೆ ನೌಕರರನ್ ದಸ್ತಗಿರಿ ಮಾಡಿ ಕಾನೂನು ಕ್ರಮಕ್ಕೊಳಪಡಿಸಲಾಗಿದೆ.<br>➢ ವಿದೇಶಗಳಿಂದ ಪ್ರವಾಸಿ, ಶೈಕ್ಷಣಿಕ ವೀಸಾಗಳಲ್ಲಿ ಬರುವ ಕೆಲವ ವ್ಯಕ್ತಿಗಳು ಡ್ರಗ್ಸ್ ಮಾರಾಟದಲ್ಲಿತೊಡಗಿದ್ದ ವಿದೇಶಿ ಪ್ರಜೆಯನ್ |

| | | |
|---|---|---|
| | | 14. ವಿಶ್ವ ಸಂಸ್ಥೆಯ ನಿರ್ದೇಶನದನ್ವಯ ಪ್ರತಿ ವರ್ಷ ಆಗಸ್ಟ್ ಮತ ಸೆಪ್ಟೆಂಬರ್ ಮಾಹೆಯಲ್ಲಿ ಮಾದಕ ವಸ್ತುಗಳ ಮಾರಾಟ ಮತ ಸಾಗಣೆಯನ್ನು ತಡೆಗಟ್ಟಲು ರಾಜ್ಯಾದ್ಯಂತ ವಿಶೇಷ ಕಾರ್ಯಚರ ಕೈಗೊಳ್ಳಲಾಗುತ್ತಿದೆ. ಈ ಅವಧಿಯಲ್ಲಿ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ಮಾದಕ ವಸ್ತುಗ ಸೇವನೆಯಿಂದಾಗುವ ದೈಹಿಕ/ ಆರ್ಥಿಕ/ ಸಾಮಾಜಿ ದುಷ್ಪರಿಣಾಮಗಳ ಕುರಿತು ವಿಶೇಷ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.<br>15. ಘನ ಸರ್ವೋಚ್ಚ ನ್ಯಾಯಾಲಯದ ಅಪರಾಧಿಕ ಮೇಲ್ಮನ ಸಂಖ್ಯೆ: 652/2012ರಲ್ಲಿ ದಿನಾಂಕ 28/01/2016 ಆದೇಶದನ್ವಯ ಡಿ.ಜಿ. & ಐ.ಜಿ.ಪಿ ರವರ ಕಛೇರಿ ಜ್ಞಾಪ ಸಂಖ್ಯೆ: ಅಪರಾಧ-6/29/ಎಸ್.ಎಂ.ಎಸ್/2016, ದಿನಾಂಕ 25/04/2016 ರಲ್ಲಿ ಮಾದಕ ವಸ್ತುಗಳ ಜಪ್ತಿ, ಸಂಗ್ರಹಣೆ ಮತ್ತು ವಿಲೇವಾರಿ ಕುರಿತು ಕೈಗೊಳ್ಳಬೇಕಾದ ಕ್ರಮಗಳ ವಿವರಗಳನ್ನು ಎಲ್ಲಾ ಘಟಕಾಧಿಕಾರಿಗಳಿಗೆ ನೀಡಲಾಗಿದೆ. |

ಒಇ 22 ಪಿಎನ್‌ಡಿ 2020

(ಬಸವರಾಜ ಬೊಮ್ಮಾಯಿ)
ಗೃಹ ಸಚಿವರು

Annexure

## Statement of NDPS Act Cases, Drugs Sized, Accused Arrested from 2015 to 2020 (15th Semptember)

| Year | NO. OF CASES | NAME OF THE DRUGS & QTY. OF DRUGS SEIZED (in KGs) | | | | | | | | | | | | No. Of Persons Arrested | |
|---|---|---|---|---|---|---|---|---|---|---|---|---|---|---|---|
| | | GANJA | BROWN SUGAR | OPIUM | HEROIN | HASHISH | CHARAS | COCAINE | Ephidrin | MDMA, MDS Powder & Capsules | Ampetamine | Yaba, Restyl,Anxit, Nitrosun & Other Tablets | LSD Paper | Indians | Foreigners |
| **2015** | 352 | 4300.3 | 0.81 | 5.32 | 0 | 0.1 | 4.614 | 0.77 | 4.821 | 0.004 | 0 | 0 | 121.436 | 554 | 11 |
| **2016** | 652 | 4180.6 | 0.943 | 1.58 | 3.38 | 0.275 | 0 | 1.1905 | 1.32 | 24 | 0.46 | 0 | 0.75 | 898 | 21 |
| **2017** | 1126 | 5785.7 | 1.132 | 0.332 | 0.228 | 6.561 | 4.934 | 1.446 | 1 | 0.223 | 0.318 | 138 | 297 | 1496 | 108 |
| **2018** | 1032 | 7867.6 | 0.766 | 1.249 | 0.299 | 0.33 | 0.374 | 2.1729 | 0 | 0.8602 | 0 | 2579 | 304 | 1422 | 48 |
| **2019** | 1661 | 4966.8 | 0.038 | 11.44 | 0.097 | 1.125 | 290.87 | 0.792 | 0 | 0.5923 | 0 | 1549 | 155.026 | 2219 | 44 |
| **2020** | 2589 | 14148 | 2.295 | 1.97 | 0 | 17.11 | 0.76 | 0.148 | 0 | 0.3014 | 0.31 | 1124 | 2106 Stripes 500 LSD Paper Sheets | 2840 | 25 |